# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಮಲೆಕೇಶಿನಗರ ಉಪ ವಿಭಾಗ, ವಾರ್ಡ್ ನಂ.47(ಡಿ.ಜೆ ಹಳ್ಳಿ)

## ವಾರ್ಡ್ ಸಮಿತಿ ಸಭೆ, ದಿನಾಂಕ:09-12-2021 ರ ಸಭಾ ನಡವಳ

ಸಂಖ್ಯೆ:ಸ.ಕಾನಿ.ಅ (ಮ.ನ)/ಪಿಆರ್/24/21-22

ದಿನಾಂಕ: 09-12-2021 ರಂದು ಮಧ್ಯಾಹ್ನ 12.00 ಗಂಟೆಗೆ ವಾರ್ಡ್ ನಂ. 47-ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಡಿ.ಜೆ ಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1. | S. Vishwanatha | Nodal Officer ward No. 47- D J Halli & Asst. Executive Engineer, J.C Nagar Sub-division |
| 2. | Sri Yuvakumar | Asst Engineer (Ward NO.47) |
| 3. | Sri. Madhu | Junior Health Inspector |
| 4. | Sri Nagaraj | Tax Inspector |
| 5. | Sri Venkatesh | Horticulture Inspector |
| 6. | Sri Mohammed Ibrahim | Water Inspector BWSSB |
| 7. | Sri. Kodhanda Rama | BESCOM |
| 8. | Sri.Mahesh Kumar. M | Sanitary Dhafedhar |
| 9. | Sri Suresh | Ward Committee Member |
| 10. | Sri Syed Ansar Pasha | Ward Committee Member |
| 11. | Sri.Suraj Advocate | Ward Committee Member |

ಶ್ರೀ. ಎಸ್.ವಿಶ್ವನಾಥ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

ದಿನಾಂಕ : 25-10-2021 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

1. 4ನೇ ಕ್ರಾಸ್ ಮೋದಿ ಗಾರ್ಡನ್ ಬೆಂಗಳೂರು ಇಲ್ಲಿ ಸಿ.ಸಿ.ಕ್ಯಾಮರಗಳನ್ನು ಅಳವಡಿಸಲು ಶ್ರೀ.ಸೂರಜ್ ರವರು ಕೋರಿದ್ದು, ಸಂಬಂಧಪಟ್ಟ ಸಹಾಯಕ ಅಭಿಯಂತರರಾದ ಶ್ರೀ.ಯುವಕುಮಾರ್ ರವರಿಗೆ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ.
2. 4ನೇ ಕ್ರಾಸ್ ಮೋದಿ ಗಾರ್ಡನ್ ಬೆಂಗಳೂರು ಇಲ್ಲಿನ ಕೊನೆಯ ಮನೆಯ ಪಕ್ಕದ ರಸ್ತೆಯಲ್ಲಿ ಘನತ್ಯಾಜ್ಯಗಳನ್ನು ಹಾಗೂ ಇತರೆ ಕಾನೂನು ಬಾಹಿರವಾದ ಕೃತ್ಯಗಳು ಸಹ ನಡೆಯುತ್ತಿರುವ ಬಗ್ಗೆ ಶ್ರೀ.ಸೂರಜ್ ರವರು ಕೋರಿದ್ದು, ಸಂಬಂಧಪಟ್ಟ ಕಿರಿಯ ಆರೋಗ್ಯ ಪರಿವೀಕ್ಷರಾದ ಶ್ರೀ.ಮಧು ರವರಿಗೆ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ.
3. 4ನೇ ಕ್ರಾಸ್ ಮೋದಿ ಗಾರ್ಡನ್ ಬೆಂಗಳೂರು ಇಲ್ಲಿನ ಸುತ್ತಮುತ್ತ ವಿದ್ಯುತ್ ಕಂಬಗಳು ಇಲ್ಲದೆ ಜನರು ಭಯದಿಂದ ಓಡಾಡುವಂತಹ ದುಸ್ಥಿತಿ ಎದುರಾಗಿದ್ದು, ವಿದ್ಯುತದ ಕಂಬಗಳನ್ನು ಅಳವಡಿಸುವ ಬಗ್ಗೆ ಶ್ರೀ.ಸೂರಜ್ ರವರು ಕೋರಿದ್ದು, ಸಂಬಂಧಪಟ್ಟ ಬೆಸ್ಕಾಂ ಅಧಿಕಾರಿಗಳಿಗೆ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ.
4. ವಾರ್ಡ್ ನಂ.47 ಕಾವಲ್‌ಭೈರಸಂದ್ರ ಬಿ.ಬಿ.ಎಂ.ಪಿ ಪಾರ್ಕ್ ಪಕ್ಕದಲ್ಲಿರುವ ವಿದ್ಯುತ್ ಉಪಕರಣದ ಕೆಳಭಾಗದಲ್ಲಿ ಸಾರ್ವಜನಿಕರು ತಮ್ಮ ಮನಸ್ಸಿಗೆ ಬಂದಂತೆ ಘನತ್ಯಾಜ್ಯವನ್ನು ಎಸೆಯುತ್ತಿದ್ದು, ಮರದ ಕೆಲವು ವಸ್ತುಗಳನ್ನು ಎಸೆಯುತ್ತಿರುವುದರಿಂದ ದುರ್ವಾಸನೆ ಬರುತ್ತಿದ್ದು, ಹೆಚ್ಚಿನ ಸಾಂಕ್ರಾಮಿಕ ರೋಗಗಳು ಉಂಟಾಗುತ್ತಿರುವ ಬಗ್ಗೆ ಸದರಿ ಕಸದ ವಿಲೇವಾರಿಯನ್ನು ಬೇರೆ ಕಡೆ ನಿಗದಿತ ಸ್ಥಳದಲ್ಲಿ

Scanned with CamScanner

ಸ್ಥಳಾಂತರಿಸುವ ಬಗ್ಗೆ ಶ್ರೀ.ಸೂರಜ್ ರವರು ಕೋರಿದ್ದು, ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಕೋಶ ರವರಿಗೆ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ.

5. ವಾರ್ಡ್ ನಂ.47 ರ ಬಿ.ಬಿ.ಎಂ.ಪಿ ಪಾರ್ಕ್ ಪಕ್ಕದಲ್ಲಿರುವ ವಿದ್ಯುತ್ ಉಪಕರಣಗಳ ಭದ್ರತೆಗಾಗಿ ಕಬ್ಬಿಣದ ರಾಡುಗಳನ್ನು ಅಳವಡಿಸುವ ಬಗ್ಗೆ ಶ್ರೀ.ಸೂರಜ್ ರವರು ಕೋರಿದ್ದು, ಸಂಬಂಧಪಟ್ಟ ಸಹಾಯಕ ಅಭಿಯಂತರರಾದ ಶ್ರೀ.ಯುವಕುಮಾರ್ ರವರಿಗೆ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ.
6. ಎನ್.ಪಿ.ಫ್ಯಾಕ್ಟರಿ ರಸ್ತೆಯಲ್ಲಿರುವ ಶಾಲೆಯ ಎದುಗಡೆ ಇರುವ ಪಾದಚಾರಿಮಾರ್ಗದಲ್ಲಿ ಮಣ್ಣು ಬಿದ್ದಿರುವುದನ್ನು ತೆರವುಗೊಳಿಸಲು ಸೂಚಿಸಲಾಯಿತು.
7. ಈದ್ಗಾ ಮೊಹಲ್ಲಾದ ಸರ್ಕಾರಿ ಉರ್ದು ಶಾಲೆಯಲ್ಲಿ ಕುಡಿಯುವ ನೀರು ಇಲ್ಲದೆ ಇರುವುದರಿಂದ ಶಾಲಾ ಮಕ್ಕಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಗಿರುತ್ತದೆ. ಅದರಂತೆ ಸದರಿ ವಿಷಯದ ಬಗ್ಗೆ ಸಂಬಂಧಪಟ್ಟ ಅಧಿಕಾರಿಯಾದ ಶ್ರೀ.ಮೊಹಮ್ಮದ್ ಇಬ್ರಾಹಿಮ್ ರವರಿಗೆ ಕ್ರಮಕೈಗೊಳ್ಳಲು ಸೂಚಿಸಲಾಯಿತು.
8. ವಾರ್ಡ್ ವ್ಯಾಪ್ತಿಯ ಅಂಬೇಡ್ಕರ್ ಪಾರ್ಕಿನಲ್ಲಿ ಚೈನ್‌ಲಿಂಕ್ ಫೆನ್ಸಿಂಗ್ ಅನ್ನು ತೋಟಗಾರಿಕೆ ಇಲಾಖೆಯವರು ಪೂರ್ಣಗೊಳಿಸಿರುತ್ತಾರೆ. ಹಾಗೂ ಸದರಿ ಚೈನ್‌ಲಿಂಕ್ ಫೆನ್ಸಿಂಗ್‌ಗೆ ಎಚ್ಚರಿಕೆಯ ಫಲಕ ಅಳವಡಿಸಲು ಬೆಸ್ಕಾಂ ರವರಿಗೆ ಸೂಚಿಸಲಾಯಿತು.
9. ಮೋದಿ ಗಾರ್ಡನ್ ಮುಖ್ಯರಸ್ತೆಯಲ್ಲಿ ಸ್ಟ್ರೀಟ್ ಲೈಟ್ ದುರಸ್ಥಿಗೊಂಡಿದ್ದು, ಸದರಿ ಸ್ಟ್ರೀಟ್ ಲೈಟ್‌ಗಳನ್ನು ಸರಿಪಡಿಸಲು ಸಂಬಂಧಪಟ್ಟ ವಿದ್ಯುತ್ ಇಲಾಖೆ ಅಧಿಕಾರಿಗಳಿಗೆ ಸೂಚಿಸಲಾಯಿತು.

ಸಹಿ

(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47

ಪ್ರತಿಯನ್ನು:

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
13ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.

Scanned with CamScanner